ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ. ವೀರಪ್ಪ ಮೊಯಿಲಿ (ಯೋಜನೆ ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಖಾತೆಯ ಮಂತ್ರಿಗಳು).—ಮಾನ್ಯ ಅಧ್ಯಕ್ಷರೆ, ೫-೬-೧೯೯೦ರ ಲಿಖಿತ ಮೂಲಕ ಉತ್ತರಿಸುವ ಎರಡನೇ ಪಟ್ಟಿಯಲ್ಲಿರುವ ೨೬ ಪ್ರಶ್ನೆಗಳ ಪೈಕಿ ಪ್ರಶ್ನೆ ಸಂಖ್ಯೆ ೭-೭೬-೧೬೫೫ ಪ್ರಶ್ನೆಗಳನ್ನು ಹೊರತುಪಡಿಸಿ ಉಳಿದ ೨೫ ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ಮಂಡಿಸಲಾಯಿತು. ಈಗ ಸಭೆಯ ಮುಂದೆ ಮಂಡಿಸಲಾಗುವ ಕಾಗದ ಪತ್ರಗಳು.

ಶ್ರೀ ಬಿ. ಎಸ್. ಯಡಿಯೂರಪ್ಪ.—ಸ್ವಾಮಿ, ಸದನದಲ್ಲಿ ಈ ರೀತಿಯಾದರೆ ನಾವು ಜನತೆಗೆ ಜಸ್ಟೀಸ್ ಕೊಡುವುದಕ್ಕೆ ಆಗುವುದಿಲ್ಲ. ಆಪರೆ ಪ್ರತಿನಿಧಿಗಳಾಗಿ ಬಂದು ನಾವು ನ್ಯಾಯ ದೊರಕಿಸಿ ಕೊಡುವುದಕ್ಕೂ ಆಗುವುದಿಲ್ಲ, ಇಂಬ ಅನ್ಯಾಯವಾಗುತ್ತದೆ.

ಶ್ರೀ ಎಂ. ವೀರಪ್ಪ ಮೊಯಿಲಿ.—ಮಾನ್ಯ ಅಧ್ಯಕ್ಷರೆ, ದಿನಾಂಕ ೪-೬-೧೯೦ರ ಸೋಮವಾರ ಪ್ರಶ್ನೋತ್ತರ ಕಾಲ ಇಲ್ಲದ್ದರಿಂದ ಆ ದಿನದ ಪಟ್ಟಿಯಲ್ಲಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ ಪೈಕಿ ಪ್ರಶ್ನೆ ಸಂಖ್ಯೆ ೧೧೬ ಅನ್ನು ಹೊರತುಪಡಿಸಿ ಇನ್ನುಳಿದ ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ,

ಅಧ್ಯಕ್ಷರು.—ಮಂಡಿಸಲಾಯಿತು.

ಅನಧಿಕೃತ ಶಾಲೆಗಳು

೧. ಶ್ರೀ ಜಿ. ರಾಜುಗೌಡ (ಹನೂರು).—ಮಾನ್ಯ ಶಿಕ್ಷಣ, ಯುವಜನ ವ್ಯವಹಾರಗಳು, ಕ್ರೀಡೆಗಳು, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ೧೯೮೮ ರಿಂದ ೧೯೯೦ ಮಾರ್ಚ್‌ವರೆವಿಗೆ ಸರ್ಕಾರದ ಅನುಮತಿ ಇಲ್ಲದೆ ರಾಜ್ಯದ ಯಾವ ಯಾವ ಜಿಲ್ಲೆಯಲ್ಲಿ ಎಷ್ಟೆಷ್ಟು ಆಂಗ್ಲ ಮಾಧ್ಯಮ ಶಾಲೆಗಳು ಆರಂಭವಾಗಿವೆ ?

ಆ) ಅವುಗಳು ಅನಧಿಕೃತ ಪಾಠ ಶಾಲೆಗಳೆಂದು ತನಿಖೆ ಮೂಲಕ ಸ್ಥಿರಪಟ್ಟಿವೆಯೇ ?

ಇ) ಆ ರೀತಿಯ ಅನಧಿಕೃತ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭ ಮಾಡದಂತೆ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಕೆ. ಹೆಚ್. ರಂಗನಾಥ (ಶಿಕ್ಷಣ ಮಂತ್ರಿಗಳು).—

ಅ) ಲಿಲಿ. ಜಿಲ್ಲಾವಾರು ವಿವರಗಳನ್ನು ಲಗತ್ತಿಸಿರುವ ಪಟ್ಟಿಯಲ್ಲಿ ತೋರಿಸಲಾಗಿದೆ.

ಆ) ಹೌದು.

ಇ) ಸಾರ್ವಜನಿಕರಿಗೆ ವೃತ್ತಪತ್ರಿಕೆಗಳ ಮುಖಾಂತರ ತಮ್ಮ ಮಕ್ಕಳನ್ನು ಇಂಥ ಅನಧಿಕೃತ ಶಾಲೆಗಳಿಗೆ ಸೇರಿಸಬಾರದೆಂದು ಎಚ್ಚರಿಸಲಾಗುತ್ತಿದೆ ಹಾಗೂ ಇಂತಹ ಶಾಲೆಗಳ ವಿದ್ಯಾರ್ಥಿಗಳಿಗೆ ಸರ್ಕಾರ ನಡೆಸುವ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಅವಕಾಶ ನೀಡಲಾಗುವುದಿಲ್ಲ.